## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ 2012-13ನೇ ಸಾಲಿನ ರಾಜ್ಯ ಅನಿಲ ಯೋಜನೆಯಡಿ ಅನುದಾನ ಬಿಡುಗಡೆ ಮಾಡುವ ಕುರಿತು

ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ 2012-13ನೇ ಸಾಲಿನಲ್ಲಿ ರಾಜ್ಯ ಅನಿಲ ಯೋಜನೆಯಡಿ ರಾಜ್ಯ ಆಯವ್ಯಯದ ಲೆಕ್ಕ ಶೀರ್ಷಿಕೆ 2810-01-198-1-01 (Lumpsum) ರಡಿ ₹ 120.00 ಲಕ್ಷಗಳನ್ನು ನಿಗದಿ ಪಡಿಸಲಾಗಿದ್ದು, 2011-12ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ರಾಜ್ಯ ಸಹಾಯಧನ ಬಾಕಿ ಪಾವತಿಗಾಗಿ ಸಂಬಂಧಿಸಿದ ಜಿಲ್ಲಾ ಪಂಚಾಯತ್‌ಗಳಿಗೆ ₹ 113.32 ಲಕ್ಷಗಳನ್ನು ಈಗಾಗಲೇ ಬಿಡುಗಡೆ ಮಾಡಿದ್ದು, ಇನ್ನುಳಿದ ₹ 6.68ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2810-01-198-1-01 ರಡಿ(Lumpsum)(ಯೋಜನೆ) ಉಡುಪಿ ಜಿಲ್ಲಾ ಪಂಚಾಯತ್‌ಗೆ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ ಗ್ರಾಅಪ 39 ಜೈಅಯೋ 2012, ಬೆಂಗಳೂರು ದಿನಾಂಕ 12.03.2013.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, 2012-13ನೇ ಸಾಲಿನಲ್ಲಿ ರಾಜ್ಯ ಅನಿಲ ಯೋಜನೆಯಡಿ 2012-13ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ರಾಜ್ಯ ಸಹಾಯಧನ ಪಾವತಿಗಾಗಿ ಲೆಕ್ಕ ಶೀರ್ಷಿಕೆ 2810-01-198-1-01(Lumpsum) ಯಡಿ (ಯೋಜನೆ) ₹ 6.68 ಲಕ್ಷಗಳನ್ನು (ರೂ. ಆರು ಲಕ್ಷದ ಅರವತ್ತೆಂಟು ಸಾವಿರಗಳು ಮಾತ್ರ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಉಡುಪಿ ರವರಿಗೆ ಬಿಡುಗಡೆ ಮಾಡಿದೆ.

**ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು 2012-13ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ರಾಜ್ಯ ಸಹಾಯಧನವನ್ನು ಪಾವತಿಸಲು ಮಾತ್ರ ವಿನಿಯೋಗಿಸತಕ್ಕದ್ದು. ಸಹಾಯಧನವನ್ನು ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡುವಂತಿಲ್ಲ.**

ಬಿಡುಗಡೆ ಮಾಡಿದ ಅನುದಾನವನ್ನು ಲೆಕ್ಕ ಶೀರ್ಷಿಕೆ **2810-01-198-1-01(Lumpsum)ಯಡಿ** (ಯೋಜನೆ) ವೆಚ್ಚ ಭರಿಸತಕ್ಕದ್ದು. ಸದರಿ ಅನುದಾನವು ಹಂಗಾಮಿಯಾಗಿದ್ದು, ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

ಈ ಆದೇಶವನ್ನು ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ: ಗ್ರಾಅಪ 81 ಇತರೆ 2012 ದಿನಾಂಕ 14.12.2012ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಎಲ್.ದೀಪಾ) 13/3/13
ನಿರ್ದೇಶಕರು( ಗ್ರಾಮೂಸೌ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ , ಬೆಂಗಳೂರು
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಉಡುಪಿ**
3. ಉಪಕಾರ್ಯದರ್ಶಿ(ಅಭಿವೃದ್ಧಿ)/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, **ಉಡುಪಿ**
4. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು
5. ಜಿಲ್ಲಾ ಖಜಾನಾಧಿಕಾರಿಗಳು, ಉಡುಪಿ
6. ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
7. ಖಜಾನೆಗಳ ಉಪನಿರ್ದೇಶಕರು, ಫೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಟವರ್, ಬೆಂಗಳೂರು
8. ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ:49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜಭವನ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
10. ರಕ್ಷಾಕಡತಕ್ಕೆ/ಹೆಚ್ಚುವರಿ ಪ್ರತಿ